# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 415 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 7/12/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕರ ಮಕ್ಕಳಿಗೆ ವ್ಯಾಸಂಗದ ಸಲುವಾಗಿ ಸರ್ಕಾರದಿಂದ ನೀಡಲಾಗುತ್ತಿರುವ ಸವಲತ್ತುಗಳೇನು; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಕಾರ್ಮಿಕರ ಮಕ್ಕಳಿಗೆ ವ್ಯಾಸಂಗದ ಸಲುವಾಗಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ;</u>**<br><br>ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳಿಗೆ ವ್ಯಾಸಂಗದ ಸಲುವಾಗಿ ಮಂಡಳಿ ವತಿಯಿಂದ ನೀಡಿರುವ ಮತ್ತು ನೀಡಲಾಗುತ್ತಿರುವ ಸವಲತ್ತುಗಳ ವಿವರಗಳು ಈ ಕೆಳಕಂಡತೆ ಇರುತ್ತದೆ.<br><br>➢ ನೋಂದಾಯಿತ ಕಟ್ಟಡ ಕಾರ್ಮಿಕರ ಇಬ್ಬರು ಮಕ್ಕಳಿಗೆ ವ್ಯಾಸಂಗಕ್ಕಾಗಿ ಕಲಿಕೆ ಭಾಗ್ಯದಡಿ ಶೈಕ್ಷಣಿಕ ಸಹಾಯಧನ,<br>➢ ಎಂಟನೇ ತರಗತಿಯಿಂದ ಹತ್ತನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಟ್ಯಾಬ್‌ಗಳ ವಿತರಣೆ,<br>➢ ಪ್ರಥಮ ಪದವಿ ಪೂರ್ವ ಮತ್ತು ದ್ವಿತಿಯ ಪದವಿ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಲ್ಯಾಪ್ ಟಾಪ್‌ಗಳ ವಿತರಣೆ.<br><br>ಒಂದನೇ ತರಗತಿಯಿಂದ ಐದನೇ ತರಗತಿವರೆಗೆ, ಆರನೇ ತರಗತಿಯಿಂದ ಎಂಟನೇ ತರಗತಿವರೆಗೆ ಮತ್ತು ಒಂಬತ್ತನೇ ತರಗತಿಯಿಂದ ಹನ್ನೆರಡನೆ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ನೋಂದಾಯಿತ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ಶಾಲಾ ಶಿಕ್ಷಣ ಕಿಟ್‌ಗಳ ವಿತರಣೆ. |

| | | |
|---|---|---|
| | | **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಮಂಡಳಿಯು ಜಾರಿಗೊಳಿಸುತ್ತಿರುವ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಯಡಿ, ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>**ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:**<br>ಮಂಡಳಿಗೆ ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆಯನ್ವಯ ಪ್ರತಿ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ.20/- ರಂತೆ ಸಹಾಯಾನುದಾನವನ್ನು ಕಲ್ಯಾಣ ನಿಧಿಗೆ ವಂತಿಗೆಯಾಗಿ ಪಾವತಿ ಮಾಡುವ ಸಂಘಟಿತ ಕಾರ್ಮಿಕರ ಓರ್ವ ಮಗುವಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ನೀಡಲಾಗುತ್ತಿದೆ.<br>ಪ್ರೌಢಶಾಲೆ (8 ರಿಂದ 10ನೇ ತರಗತಿವರೆಗೆ) ರೂ.6,000/-, ಪಿಯುಸಿ/ ಡಿಪ್ಲೊಮಾ/ ಐಟಿಐ/ ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/-, ಪದವಿ ಶಿಕ್ಷಣಕ್ಕಾಗಿ ರೂ.10,000/, ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/-, ಇಂಜಿನೀಯರಿಂಗ್/ ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/- ಗಳ ಪ್ರೋತ್ಸಾಹ ಧನ ನೀಡಲಾಗುವುದು. |
| ಆ) | ಸದರಿ ಸವಲತ್ತುಗಳನ್ನು ನೀಡುವಲ್ಲಿ ಅನುಸರಿಸಲಾಗುವ ಮಾನದಂಡಗಳೇನು; (ವಿವರ ನೀಡುವುದು) | ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳ ವಿವಿಧ ಯೋಜನೆಗಳಡಿ ಮಕ್ಕಳ ವ್ಯಾಸಂಗಕ್ಕಾಗಿ ನೀಡಲಾಗುವ ಶೈಕ್ಷಣಿಕ ಧನಸಹಾಯ ನೀಡುವಲ್ಲಿ ಅನುಸರಿಸಬೇಕಾದ ಮಾನದಂಡಗಳ ವಿವರ ಈ ಕೆಳಕಂಡಂತಿದೆ.<br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br>ನೋಂದಾಯಿತ ಕಟ್ಟಡ ಕಾರ್ಮಿಕರ ಸದ್ಯಸ್ವತ್ವ ಜೇಷ್ಠತೆ ಮತ್ತು ಚಾಲ್ತಿಯಲ್ಲಿರುವ ನೋಂದಣಿ ಪತ್ರದ ಬಗ್ಗೆ ಖಾತರಿ, ಕಟ್ಟಡ ಕಾರ್ಮಿಕರ ಮಕ್ಕಳು ಪಡೆದಿರುವ ಅಂಕಗಳ ಪಟ್ಟಿ ಮತ್ತು ಸರ್ಕಾರದ ಯಾವುದೇ ಯೋಜನಗಳಡಿ ಉಚಿತ ಲ್ಯಾಪ್‌ಟಾಪ್ ಮತ್ತು ಟ್ಯಾಬ್ ಗಳನ್ನು ಪಡೆಯದಿರುವ ಸ್ವಯಂಘೋಷಿತ ಶಪಥ ಪತ್ರ (ನೋಟರಿಯಿಂದ ದೃಢೀಕರಿಸಿದ ಪ್ರಮಾಣ ಪತ್ರ) ಹಾಗೂ ಶಾಲೆಯಿಂದ ಪಡೆದ ವ್ಯಾಸಂಗ ದೃಢೀಕರಣ ಪತ್ರಗಳನ್ನು ಮಾನದಂಡವಾಗಿ ಅನುಸರಿಸಲಾಗುತ್ತದೆ. |

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಯಡಿ ಶೈಕ್ಷಣಿಕ ಧನಸಹಾಯ ಪಡೆಯಲು ಮಾನದಂಡಗಳು;<br>ಈ ಸೌಲಭ್ಯವು ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳ ಮಕ್ಕಳಿಗೆ ಅನ್ವಯಿಸುತ್ತದೆ,<br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಒದಗಿಸಲು ಅನುಸರಿಸುವ ಮಾನದಂಡಗಳು ಈ ಕೆಳಗಿನಂತಿದೆ.<br>ವಂತಿಗೆ ಪಾವತಿಸಿರಬೇಕು, ದೃಢೀಕರಿಸಿದ ಅಂಕಪಟ್ಟಿ, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಪ್ರತಿ, ವಿದ್ಯಾರ್ಥಿ ಮತ್ತು ಪೋಷಕರ ಆಧಾರ್ ಕಾರ್ಡ್ ಆನ್‌ಲೈನ್ ಅರ್ಜಿಯಲ್ಲಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾತಿ / ಪ. ಪಂಗಡದ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು. |
| **ಇ)** | ಯಾವ ಯಾವ ವರ್ಗದ ಮಕ್ಕಳಿಗೆ ಎಷ್ಟು ಮೊತ್ತವನ್ನು ನೀಡಲಾಗುವುದು; | ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳ ಮೂಲಕ ಕಾರ್ಮಿಕರ ಮಕ್ಕಳಿಗೆ ನೀಡಲಾಗುವ ಶೈಕ್ಷಣಿಕ ಧನಸಹಾಯದ ಮೊತ್ತಕ್ಕೆ ಸಂಬಂಧಿಸಿದ ಮಾಹಿತಿ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಮಂಡಳಿ ವತಿಯಿಂದ ಅರ್ಹ ಕಟ್ಟಡ ಕಾರ್ಮಿಕರ ಮಕ್ಕಳಿಗೆ ನೀಡುತ್ತಿರುವ ಶೈಕ್ಷಣಿಕ ಧನ ಸಹಾಯದ ವಿವರಗಳನ್ನು **ಅನುಬಂಧದಲ್ಲಿ** ಲಗ್ತತಿಸಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳ ಮಕ್ಕಳಿಗೆ ಈ ಸೌಲಭ್ಯವನ್ನು ನೀಡಲಾಗುತ್ತಿದ್ದು, ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ. |

| | | |
|---|---|---|
| | | **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br><br>ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯದ ಮೊತ್ತವು ಈ ಕೆಳಗಿನಂತಿದೆ.<br><br>ಪ್ರೌಢಶಾಲೆ (8 ರಿಂದ 10ನೇ ತರಗತಿವರೆಗೆ) ರೂ.6,000/-, ಪಿಯುಸಿ/ ಡಿಪ್ಲೊಮಾ/ ಐಟಿಐ/ ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/-, ಪದವಿ ಶಿಕ್ಷಣಕ್ಕಾಗಿ ರೂ.10,000/, ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/-, ಇಂಜಿನೀಯರಿಂಗ್/ ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/- ಗಳ ಪ್ರೋತ್ಸಾಹ ಧನ ನೀಡಲಾಗುವುದು. |
| ಈ) | ಸದರಿ ವಿದ್ಯಾರ್ಥಿವೇತನ / ಪ್ರೋತ್ಸಾಹಧನವನ್ನು ಹೆಚ್ಚಿಸಲು ಸರ್ಕಾರ ಚಿಂತಿಸುವುದೇ? | ವಿದ್ಯಾರ್ಥಿವೇತನ / ಪ್ರೋತ್ಸಾಹಧನವನ್ನು ಹೆಚ್ಚಿಸಲು ಸರ್ಕಾರದಲ್ಲಿ ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

**ಕಾಇ 515 ಎಲ್ ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ

## ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 415

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,100 |
| 2 | 6 ರಿಂದ 7 ನೇ ತರಗತಿ | 1,250 |
| 3 | 8 ನೇ ತರಗತಿ | 1,350 |
| 4 | 9 ಹಾಗೂ 10ನೇ ತರಗತಿ | 3,000 |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 6 | ಪದವಿ | 6,000 |
| 7 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 8 | ಸ್ನಾತಕೋತ್ತರ ಪದವಿ | 10,000 |
| 9 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 10 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಎಕ್ಸೂಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 11 | ಬಿ.ಎಡ್ | 6,000 |
| 12 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 13 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 14 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 15 | ಎಮ್‌ಡಿ ಮೆಡಿಕಲ್ | 12,000 |
| 16 | ಡಿ.ಎಡ್ | 4,600 |
| 17 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 18 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್ ಇಆರ್/ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |